ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ/35/ಎಲ್ಆರ್‌ಡಿಸಿ/ಎನ್‌ಬಿಎ/2014-15

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ,
ಅರಮನೆ ರಸ್ತೆ,
ಬೆಂಗಳೂರು-560001
ದಿನಾಂಕ: 22.6.2016

**ಜ್ಞಾಪನ**

ವಿಷಯ: ಮಾನ್ಯತೆ ಪಡೆಯುವ ಸಂಬಂಧ ಸ್ವಯಂ ಮೌಲ್ಯಮಾಪನ ವರದಿ-SAR ಗಳನ್ನು ನಿರ್ದೇಶನಾಲಯಕ್ಕೆ ಸಲ್ಲಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಪತ್ರಗಳ ಸಂಖ್ಯೆ: ಡಿಟಿಇ/35/ಎಲ್ಆರ್‌ಡಿಇ/ಎನ್‌ಬಿಎ/2014-15, ದಿ:25-1-2016, 29-2-2016, 11-5-2016 ಮತ್ತು 28.5.2016

*****

ಮೇಲ್ಕಂಡ ವಿಷಯ ಹಾಗು ಉಲ್ಲೇಖಗಳಿಗೆ ಸಂಬಂಧಿಸಿದಂತೆ ಈ ಕೆಳಗಿನ ಸರ್ಕಾರಿ ಪಾಲಿಟೆಕ್ನಿಕ್‌ಗಳು ತಮ್ಮ ಸಂಸ್ಥೆಯಲ್ಲಿರುವ ಎಲ್ಲಾ ಪ್ರೋಗ್ರಾಂಗಳಲ್ಲಿ ಮಾನ್ಯತೆ ಸಂಬಂಧಿ ಭರ್ತಿಮಾಡಿದ ಸ್ವಯಂ ಮೌಲ್ಯಮಾಪನ ವರದಿಗಳನ್ನು ವಿಶ್ಲೇಷಿಸಿ, ತುಂಬಿ ಸ್ಪಷ್ಟ ಅಭಿಪ್ರಾಯಗಳೊಂದಿಗೆ ಕೊನೆಯದಾಗಿ ದಿ:6-6-2016ರೊಳಗಾಗಿ ನಿರ್ದೇಶನಾಲಯಕ್ಕೆ ಸಲ್ಲಿಸಲು ಸೂಚಿಸಲಾಗಿತ್ತು.

ಆದರೆ ಇದುವರೆಗೂ ಈ ಕೆಳಗಿನ ಪಾಲಿಟೆಕ್ನಿಕ್‌ಗಳು SAR ವರದಿಗಳನ್ನು ಸಲ್ಲಿಸದೆ ಇರುವುದು ವಿಷಾದನಿಯ ಸಂಗತಿಯಾಗಿರುತ್ತದೆ. ಸದರಿ ಸಂಸ್ಥೆಗಳಿಗೆ ಸಾಕಷ್ಟು ಕಾಲಾವಕಾಶ ಮತ್ತು ಸಲಹೆ ಸೂಚನೆಗಳನ್ನು ನೀಡಿದ್ದರೂ, ಕ್ಷುಲ್ಲಕ ಕಾರಣಗಳನ್ನು ನೀಡಿ ವರದಿ ಸಲ್ಲಿಸಲು ಪದೇ ಪದೇ ಕಾಲಾವಕಾಶ ಕೋರಿ ಸದರಿ ವರದಿಗಳನ್ನು ತುಂಬಿ ಕಳುಹಿಸಿಕೊಡದೇ ಇರುವುದನ್ನು ಇಲಾಖೆಯು ಗಂಭೀರವಾಗಿ ಪರಿಗಣಿಸಿದ್ದು, ಸಂಬಂಧಿಸಿದ ಪ್ರಾಂಶುಪಾಲರುಗಳು ನಿರ್ದಿಷ್ಟವಾದ ಕಾರಣಗಳೊಂದಿಗೆ ದಿನಾಂಕ: 08.07.2016 ರೊಳಗಾಗಿ ಕೇಂದ್ರ ಕಛೇರಿಗೆ ಖುದ್ದಾಗಿ ಭೇಟಿ ನೀಡಿ ವರದಿ ಸಲ್ಲಿಸುವುದು. ತಪ್ಪಿದಲ್ಲಿ ಕೆ.ಸಿ.ಎಸ್ ನಿಯಮಾವಳಿಗಳ ಪ್ರಕಾರ ಕ್ರಮ ಜರುಗಿಸಲಾಗುವುದು ಎಂಬುದಾಗಿ ಸೂಚಿಸಲಾಗಿದೆ.

ನಿರ್ದೇಶಕರು

ಗೆ,

1. ಪ್ರಾಂಶುಪಾಲರುಗಳು: ಎಸ್.ಜೆ (ಸಂಜೆ) ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು, ಸರ್ಕಾರಿ ಮುದ್ರಣ ತಂತ್ರಜ್ಞಾನ ಸಂಸ್ಥೆ, ಬೆಂಗಳೂರು, ಎಸ್.ಆರ್.ಸಿ ಇನ್ಸಿಟಟ್ಯೂಟ್ ಆಫ್ ಬಿಸಿನೆಸ್ ಮ್ಯಾನೇಜ್‌ಮೆಂಟ್, ಬೆಂಗಳೂರು, ಸರ್ಕಾರಿ ಚಲನಚಿತ್ರ ಮತ್ತು ದೂರದರ್ಶನ ಸಂಸ್ಥೆ, ಹೆಸರಘಟ್ಟ, ಬೆಂಗಳೂರು. ಸರ್ಕಾರಿ ಪಾಲಿಟೆಕ್ನಿಕ್, ಬಳ್ಳಾರಿ, ಸರ್ಕಾರಿ ಪಾಲಿಟೆಕ್ನಿಕ್, ಝಳಕಿ, ಸರ್ಕಾರಿ ಪಾಲಿಟೆಕ್ನಿಕ್, ಬಾಗೇಪಲ್ಲಿ, ಸರ್ಕಾರಿ ಪಾಲಿಟೆಕ್ನಿಕ್, ಹುಬ್ಬಳ್ಳಿ, ಸರ್ಕಾರಿ ಪಾಲಿಟೆಕ್ನಿಕ್, ಅಫ್‌ಜಲ್‌ಪುರ, ಸರ್ಕಾರಿ ಪಾಲಿಟೆಕ್ನಿಕ್, ರಾಯಚೂರು, ಸರ್ಕಾರಿ ಪಾಲಿಟೆಕ್ನಿಕ್, ದೇವದುರ್ಗ, ಸರ್ಕಾರಿ ಪಾಲಿಟೆಕ್ನಿಕ್, ಲಿಂಗಸಗೂರು.
2. ಇ-ಆಡಳಿತ ವಿಭಾಗದ ಸಂಯೋಜಕರ ಸೂಕ್ತ ಕ್ರಮಕ್ಕಾಗಿ
3. ನಿರ್ದೇಶಕರ ಆಪ್ತ ಸಹಾಯಕರ ಮಾಹಿತಿಗಾಗಿ.